# ಹಾಸ್ಟೆಲ್, ಇಂದಿರಾ ಕ್ಯಾಂಟೀನ್, ಬಳೇಮಂಟಪಕ್ಕೆ ಜಿಲ್ಲಾಧಿಕಾರಿ ಭೇಟಿ



**ಯಳಂದೂರು:** ಪಟ್ಟಣದ ಸಮಾಜ ಕಲ್ಯಾಣ ಇಲಾಖೆಯ ವಿದ್ಯಾರ್ಥಿ ನಿಲಯ, ಇಂದಿರಾ ಕ್ಯಾಂಟೀನ್ ಹಾಗೂ ಐತಿಹಾಸಿಕ ಬಳೇಮಂಟಪಕ್ಕೆ ಜಿಲ್ಲಾಧಿಕಾರಿ ಶ್ರೀ ರೂಪಾ ಬುಧವಾರ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಪಟ್ಟಣದ ಬಳೇಪೇಟೆಯಲ್ಲಿರುವ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯದ ದುರಸ್ತಿ ಕಾಮಗಾರಿ ಮಂದಗತಿಯಲ್ಲಿ ನಡೆಯುತ್ತಿದ್ದು ಈ ತಿಂಗಳಿಂದ ಹಾಸ್ಟೆಲ್‌ಗಳು ಆರಂಭಗೊಂಡರೂ ಸಹ ಇನ್ನೂ ಕೂಡ ಕಾಮಗಾರಿ ಪೂರ್ಣಗೊಳ್ಳದಿರುವುದರ ಬಗ್ಗೆ ಸಂಬಂಧಪಟ್ಟ ನಿರ್ಮಿತಿ ಕೇಂದ್ರದ ಜೆಇ ಹಾಗೂ ಇದನ್ನು ಗುತ್ತಿಗೆ ಪಡೆದಿರುವರ ವಿರುದ್ಧ ಅಸಮಧಾನ ವ್ಯಕ್ತಪಡಿಸಿದರು. ಕಾಮಗಾರಿ ಆರಂಭಗೊಂಡು ಹಲವು ತಿಂಗಳು ಕಳೆದರೂ ಇನ್ನೂ ಮುಗಿದಿಲ್ಲ. ಇದರಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತದೆ. ಇಲ್ಲಿನ ಕಿಟಕಿಗಳನ್ನು ದುರಸ್ತಿಗೊಳಿಸಿ ಶುಚಿತ್ವ ಕಾಪಾಡಬೇಕು, ಸುಣ್ಣ-ಬಣ್ಣ ಬಳಿಯುವ ಕೆಲಸವನ್ನು ಬೇಗ ಪೂರ್ಣಗೊಳಿಸಬೇಕು. ಇದನ್ನು ವಾರದೊಳಗೆ ಮುಗಿಸಬೇಕು ಎಂದು ಗಡುವು ನೀಡಿದರು. ಅಲ್ಲದೆ ಬಾಲಕಿಯರ ವಿದ್ಯಾರ್ಥಿ ನಿಲಯದಲ್ಲಿ ಬೆಳಿಗ್ಗೆ ವಿದ್ಯಾರ್ಥಿಗಳಿಗೆ ತಿಂಡಿ ಕೊಡಲು ಅಡುಗೆಯನ್ನೇ ಮಾಡಿಲ್ಲ ಎಂದು ಇಲ್ಲಿಗೆ ಅಡುಗೆ ಸಹಾಯಕರಿಂದ ಮಾಹಿತಿ ಪಡೆದು ಈ ಬಗ್ಗೆ ಇಲ್ಲಿನ ವಾರ್ಡನ್‌ಗಳಿಗೆ ಎಚ್ಚರಿಕೆ ನೀಡಿದರು. ಆದರೆ ವಿದ್ಯಾರ್ಥಿಗಳು ಇಲ್ಲಿಗೆ ಬಂದಿಲ್ಲದ ಕಾರಣ ಅಡುಗೆ ಮಾಡಿಲ್ಲ ಎಂದು ಇಲ್ಲಿನ ವಾರ್ಡನ್ ಮಾಹಿತಿ ನೀಡಿದರು.

ಪಟ್ಟಣದಲ್ಲಿರುವ ಗೌರೇಶ್ವರ ದೇಗುಲ ಒಂದು ಐತಿಹಾಸಿಕ ದೇಗುಲವಾಗಿದೆ. ಇದರ ಮುಂಭಾಗದಲ್ಲಿರುವ ಬಳೇಮಂಟಪದ ಆಕರ್ಷಕ ಕೆತ್ತನೆಯಿಂದ ಕೂಡಿದೆ. ಇದರ ಸುತ್ತಮುತ್ತಲೂ ಅಶುಚಿತ್ವ ಇದ್ದು ಇಲ್ಲಿ ಶುಚಿತ್ವ ಕಾಪಾಡಬೇಕು. ಅಲ್ಲದೆ ಈ ಮಂಟಪ ಇರುವುದರ ಬಗ್ಗೆ ಸಾರ್ವಜನಿಕರಿಗೆ ಮಾಹಿತಿ ಕೊರತೆ ಇದ್ದು ಇಲ್ಲಿಗೆ ನಾಮಫಲಕವನ್ನು ಅಳವಡಿಸಬೇಕು. ಈ ಬಗ್ಗೆ ಪ್ರಚಾರಕ್ಕೆ ಆದ್ಯತೆ ನೀಡಬೇಕು ಎಂದು ಇಲ್ಲಿನ ಅರ್ಚಕ ಮಹೇಶ್ ಚಂದ್ರಮೌಳಿ ದೀಕ್ಷೀತ್, ರಾಮಣ್ಣ ಸೇರಿದಂತೆ ಹಲವು ಸಾರ್ವಜನಿಕರು ಅಹವಾಲು ಸಲ್ಲಿಸಿದರು. ಈ ಬಗ್ಗೆ ಕ್ರಮ ವಹಿಸುವ ಭರವಸೆಯನ್ನು ಜಿಲ್ಲಾಧಿಕಾರಿಗಳು ನೀಡಿದರು.

ನಂತರ ಪಟ್ಟಣ ಪಂಚಾಯಿತಿ ಬಳಿ ಇರುವ ಇಂದಿರಾ ಕ್ಯಾಂಟೀನ್‌ಗೆ ಜಿಲ್ಲಾಧಿಕಾರಿಗಳು ಭೇಟಿ ನೀಡಿ ಇಲ್ಲಿನ ಆಹಾರ ಗುಣಮಟ್ಟವನ್ನು ಪರಿಶೀಲಿಸಿದರು. ಗುಣಮಟ್ಟದಲ್ಲಿ ಆಹಾರ ತಯಾರಿಕೆ ಮಾಡುತ್ತಿಲ್ಲ. ಸ್ವಚ್ಚತೆಯನ್ನು ಕಾಪಾಡುತ್ತಿಲ್ಲ. ನಿಗಧಿತ ಪ್ರಮಾಣದಲ್ಲಿ ಆಹಾರ ತಯಾರಿಕೆ ಆಗುತ್ತಿಲ್ಲ, ಶುದ್ಧ ಕುಡಿಯುವ ನೀರು ಪೂರೈಸುತ್ತಿಲ್ಲ ಎಂದು ದೂರುಗಳಿದ್ದು ಇದನ್ನು ಸರಿಪಡಿಸಿಕೊಳ್ಳಬೇಕು ಇಲ್ಲವಾದಲ್ಲಿ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಸಂಬಂಧಪಟ್ಟವರಿಗೆ ಎಚ್ಚರಿಕೆ ನೀಡಿದ ಪ್ರಸಂಗವೂ ಜರುಗಿತು.

ಈ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಮುನಿರಾಜು, ಸಹಾಯಕ ನಿರ್ದೇಶಕ ಕೇಶವಮೂರ್ತಿ ಪಪಂ ಮುಖ್ಯಾಧಿಕಾರಿ ಮಹೇಶ್‌ಕುಮಾರ್ ಆರೋಗ್ಯಾಧಿಕಾರಿ ರಾಘವೇಂದ್ರ, ಜೆಇ ನಾಗೇಂದ್ರ, ನಿರ್ಮಿತಿ ಕೇಂದ್ರದ ವ್ಯವಸ್ಥಾಪಕ ರಮೇಶ್‌ಕುಮಾರ್, ಜೆಇ ನಂದೀಶ್ ಸೇರಿದಂತೆ ಅನೇಕ ಅಧಿಕಾರಿಗಳು ಇದ್ದರು.

# ಪೆದ್ದಿಗೆ ಮತ್ತೊಂದು ಸಂಕಷ್ಟ


**ಹೈದರಾಬಾದ್:** ತೆಲುಗಿನ ಬಹು ನಿರೀಕ್ಷಿತ 'ಪೆದ್ದಿ' ಸಿನಿಮಾ ಬಿಡುಗಡೆಯ ಮುನ್ನವೇ ಮತ್ತೊಂದು ವಿವಾದಕ್ಕೆ ಸಿಲುಕಿದೆ. ಈಗಾಗಲೇ ಚಿತ್ರದ ಕೆಲವು ವಿಷಯಗಳ ಕುರಿತು ಸಾಮಾಜಿಕ ಜಾಲತಾಣಗಳಲ್ಲಿ ಟೀಕೆಗಳು ವ್ಯಕ್ತವಾಗಿದ್ದರೆ, ಇದೀಗ ಬುಡಕಟ್ಟು ಜನಾಂಗದ ಭಾವನೆಗಳಿಗೆ ಧಕ್ಕೆ ತಂದಿರುವ ಆರೋಪದ ಹಿನ್ನೆಲೆಯಲ್ಲಿ ಚಿತ್ರತಂಡದ ವಿರುದ್ಧ ದೂರು ದಾಖಲಾಗುವ ಸಾಧ್ಯತೆ ಎದುರಾಗಿದೆ.

ಚಿತ್ರದ ನಿರ್ಮಾಣ ಸಂಸ್ಥೆ, ನಿರ್ದೇಶಕ ಬುಚ್ಚಿಬಾಬು ಹಾಗೂ ಸೆನ್ಸಾರ್ ಮಂಡಳಿಯ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಆಂಧ್ರಪ್ರದೇಶದ ಮಾನ್ಯಂ ಮತ್ತು ವಿಜಯನಗರಂ ಜಿಲ್ಲೆಯ ಪೊಲೀಸ್ ವರಿಷ್ಠಾಧಿಕಾರಿಗಳು (ಎಸ್‌ಪಿ) ಹಾಗೂ ಜಿಲ್ಲಾಧಿಕಾರಿಗಳಿಗೆ ಬುಡಕಟ್ಟು ಜನಾಂಗದ ಮುಖಂಡರು ದೂರು ಸಲ್ಲಿಸಿದ್ದಾರೆ.

ದೂರಿನಲ್ಲಿ, ಚಿತ್ರದಲ್ಲಿ ಬಳಸಿರುವ ಕೆಲವು ಪದಗಳು ಹಾಗೂ ಸಂಭಾಷಣೆಗಳು ಬುಡಕಟ್ಟು ಸಮುದಾಯವನ್ನು ಅವಹೇಳನ ಮಾಡುವಂತಿದ್ದು, ಜನಾಂಗದ ಗೌರವ ಮತ್ತು ಭಾವನೆಗಳಿಗೆ ಧಕ್ಕೆ ಉಂಟುಮಾಡುತ್ತವೆ ಎಂದು ಆರೋಪಿಸ ಲಾಗಿದೆ. ಇಂತಹ ಪದಗಳ ಬಳಕೆಯಿಂದ ಸಮುದಾಯದ ಜನರಲ್ಲಿ ಅಸಮಾಧಾನ ಉಂಟಾಗಿದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಇದರ ಜೊತೆಗೆ, ಚಿತ್ರದಲ್ಲಿ ಆಕ್ಷೇಪಾರ್ಹ ಸಂಭಾಷಣೆಗಳನ್ನು ಸೇರಿಸಿದ ಚಿತ್ರತಂಡದ ವಿರುದ್ಧ ಹಾಗೂ ಅಂತಹ ದೃಶ್ಯಗಳಿಗೆ ಅನುಮತಿ ನೀಡಿದ ಸೆನ್ಸಾರ್ ಮಂಡಳಿಯ ವಿರುದ್ಧವೂ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಲಾಗಿದೆ. ಕೆಲ ಮುಖಂಡರು ಅಟ್ರಾಸಿಟಿ ಕಾಯ್ದೆಯಡಿ ಪ್ರಕರಣ ದಾಖಲಿಸುವಂತೆ ಒತ್ತಾಯಿಸಿದ್ದಾರೆ.

ಈ ವಿವಾದದ ನಡುವೆಯೂ ಚಿತ್ರದ ನಾಯಕ ನಟ ರಾಮ್‌ಚರಣ್ ವಿರುದ್ಧ ಯಾವುದೇ ದೂರು ದಾಖಲಾಗಿಲ್ಲ. ಚಿತ್ರದಲ್ಲಿ ಅವರು ಬುಡಕಟ್ಟು ಜನಾಂಗದ ವ್ಯಕ್ತಿಯ ಪಾತ್ರದಲ್ಲಿ ಕಾಣಿಸಿಕೊಂಡಿದ್ದರೂ, ವಿವಾದಾತ್ಮಕ ಸಂಭಾಷಣೆ ಅಥವಾ ಕಥಾ ನಿರ್ಧಾರಗಳಿಗೆ ಸಂಬಂಧಿಸಿ ಅವರ ಹೆಸರನ್ನು ದೂರಿನಲ್ಲಿ ಸೇರಿಸಲಾಗಿಲ್ಲ. ಹೀಗಾಗಿ ಸದ್ಯಕ್ಕೆ ರಾಮ್‌ಚರಣ್ ಈ ಕಾನೂನು ವಿವಾದದಿಂದ ದೂರ ಉಳಿದಿದ್ದಾರೆ.



## ಕಾಡಾನೆ ಬಳಿಕ ಚಾರ್ಮಾಡಿ ಘಾಟಿಯಲ್ಲಿ ಚಿರತೆ ಪ್ರತ್ಯಕ್ಷ



**ಚಿಕ್ಕಮಗಳೂರು:** ಚಾರ್ಮಾಡಿ ಘಾಟಿಯ ಮೂಡಿಗೆರೆ ಅರಣ್ಯ ವಲಯದ ರಸ್ತೆ ತಡೆಗೋಡೆ ಬಳಿ ಚಿರತೆ ಕಾಣಿಸಿಕೊಂಡಿದೆ. ಚಿರತೆಯನ್ನು ಕಂಡ ಪ್ರವಾಸಿಗರು ಆತಂಕಕ್ಕೀಡಾಗಿದ್ದಾರೆ.

ಇಷ್ಟು ದಿನಗಳ ಕಾಲ ಚಾರ್ಮಾಡಿ ಘಾಟಿಯಲ್ಲಿ ಕಾಡಾನೆ ಹಾವಳಿ ಹೆಚ್ಚಾಗಿತ್ತು. ರಸ್ತೆ ಮಧ್ಯೆ ಗಂಟೆಗಟ್ಟಲೇ ನಿಂತು ವಾಹನ ಸವಾರರಲ್ಲಿ ಆತಂಕ ಸೃಷ್ಟಿಸುತ್ತಿತ್ತು. ಇದೀಗ ಚಿರತೆ ಪ್ರತ್ಯಕ್ಷವಾಗಿದ್ದು, ಪ್ರವಾಸಿಗರು ಹಾಗೂ ವಾಹನ ಸವಾರರ ಆತಂಕ ಹೆಚ್ಚಾಗಿದೆ. ಚಿರತೆಯ ಫೋಟೋ ಪ್ರವಾಸಿಗರ ಮೊಬೈಲ್‌ನಲ್ಲಿ ಸೆರೆಯಾಗಿದೆ.

ಮಳೆಗಾಲ ಆರಂಭವಾಗಿರುವುದರಿಂದ ಘಾಟಿಯಲ್ಲಿ ದಟ್ಟ ಮಂಜು ಇರುತ್ತದೆ. ಈ ಸಮಯದಲ್ಲಿ ರಸ್ತೆ ಕಾಣದಂತಹಾ ಸ್ಥಿತಿ ಇರುತ್ತದೆ. ಇಂತಹ ಸಂದರ್ಭದಲ್ಲಿ ಕಾಡು ಪ್ರಾಣಿಗಳ ಚಲನವಲನಗಳು ತಕ್ಷಣಕ್ಕೆ ಗಮನಕ್ಕೆ ಬರುವುದಿಲ್ಲ. ಆದರೂ, ಈ ಮಾರ್ಗದಲ್ಲಿ ಸಂಚರಿಸುವ ಸಾವಿರಾರು ಪ್ರವಾಸಿಗರು ಫೋಟೋ ಹಾಗೂ ಸೆಲ್ಫಿಗಾಗಿ ವಾಹನಗಳನ್ನು ನಿಲ್ಲಿಸಿ ಕೆಳಗಿಳಿಯುತ್ತಿರುವುದು ಅನಾಹುತಕ್ಕೆ ಕಾರಣವಾಗಬಹುದು.

ಕೆಲ ಪ್ರವಾಸಿಗರು ಫೋಟೋಗಾಗಿ ಬಂಡೆ ಮೇಲೆ ಹತ್ತುತ್ತಾರೆ. ಈ ವೇಳೆ ಪ್ರಾಣಿಗಳು ದಾಳಿ ಮಾಡುವ ಸಾಧ್ಯತೆ ಇರಲಿದೆ. ಜಾರಿ ಬೀಳುವ ಸಂಭವವೂ ಇರುತ್ತದೆ. ಪ್ರಾವಾಸಿಗರು ಜಾಗ್ರತೆಯಿಂದ ಸಂಚರಿಸಬೇಕು ಎಂದು ಪೊಲೀಸರು ಹಾಗೂ ಅರಣ್ಯ ಇಲಾಖೆ ಅಧಿಕಾರಿಗಳು ಎಚ್ಚರಿಕೆ ನೀಡಿದ್ದಾರೆ.

# ದೇವನೂರರ ರಕ್ತ ರಹಿತ ಕ್ರಾಂತಿ ಇಂದಿನ ಅಗತ್ಯ:ಮದ್ದೂರು ದೊರೆಸ್ವಾಮಿ



**ಯಳಂದೂರು:** ಸಾಹಿತಿ ದೇವನೂರು ಮಹಾದೇವ ಸರಳ ಸಜ್ಜನಿಕೆ ಹಾಗೂ ಮೌನ ಪ್ರತಿಭಟನೆ, ರಕ್ತರಹಿತ ಕ್ರಾಂತಿ, ಅಹಿಂಸಾ ಹಾಗೂ ಸಮತಾವಾದಗಳ ಪ್ರತಿಪಾದಕರಾಗಿದ್ದು. ಆ ಮೂಲಕ ಸಮಾಜದ ಇಂದಿನ ಸಮಸ್ಯೆಗಳನ್ನು ವಿರೋಧಿಸುತ್ತಾ ಬಂದಿದ್ದಾರೆ ಈ ಮಾರ್ಗ ಇಂದಿನ ಅಗತ್ಯವಾಗಿದ್ದು ಎಲ್ಲರೂ ಇದನ್ನು ಅಳವಡಿಸಿಕೊಳ್ಳಬೇಕು ಎಂದು ಸಾಹಿತಿ, ಶಿಕ್ಷಕ ಮದ್ದೂರು ದೊರೆಸ್ವಾಮಿ ಕರೆ ನೀಡಿದರು.

ಅವರು ತಾಲೂಕಿನ ಆಲ್ಕೆರೆ ಅಗ್ರಹಾರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಂಗಳವಾರ ಮಾನವ ಬಂಧುತ್ವ ವೇದಿಕೆಯ ಸಯಹೋಗದಲ್ಲಿ ಸಾಹಿತಿ ದೇವನೂರು ಮಹದೇವರವರ ಹುಟ್ಟುಹಬ್ಬದ ನಿಮಿತ್ತ ನಡೆದ ವಿದ್ಯಾರ್ಥಿಗಳಿಗೆ ಶಾಲಾ ಪರಿಕರಗಳ ವಿತರಣಾ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.

ದೇವನೂರು ಸಮಕಾಲೀನ ಸಮಸ್ಯೆಗಳ ಈ ಭಾಗದ ಗಟ್ಟಿ ಧ್ವನಿಯಾಗಿದ್ದಾರೆ. ಇವರು ನಮ್ಮ ನಡುವಿನ ಸಾಮಾಜಿಕ ಸಮಾನತೆಯ ಅಸ್ಮಿತೆಯಾಗಿದ್ದಾರೆ. ಒಬ್ಬ ನೈಜ ಬರಹಗಾರರಾಗಿ ಇವರು ಗುರುತಿಸಿಕೊಂಡು ಇವರ ಸಾಮಾಜಿ ಜವಾಬ್ದಾರಿಯನ್ನು ಜನಸಾಮಾನ್ಯರ ದುಖಃದುಮ್ಮಾನಗಳಿಗೆ ಸ್ಪಂಧಿಸುವ ಹೃದಯವಂತ ಸಾಮಾಜಿಕ ಕಾರ್ಯಕರ್ತರಾಗಿ, ಬರಹಗಾರರಾಗಿ ನಮ್ಮ ನಡುವೆ ಇರುವುದೇ ಒಂದು ಸೋಜಿಗವಾಗಿದೆ. ಸಮಕಾಲೀನ ಸಮಸ್ಯೆಗಳಿಗೆ ಧನಿಯಾಗಿ, ಇದಕ್ಕೆ ಪರಿಹಾರ ಸೂಚಿಸುವ ವಿಶೇಷ ವ್ಯಕ್ತಿಯಾಗಿ, ಸರಳವಾಗಿ ಜೀವಿಸಿ ಶೋಷಿತರ ಹಕ್ಕುಗಳಿಗೆ ಚ್ಯುತಿ ಬಂದಾಗ ವ್ಯವಸ್ಥೆಯನ್ನು ಬಡಿದೆಚ್ಚರಿಸುವ ಕೆಲಸವನ್ನು ಪ್ರಾಮಾಣಿಕವಾಗಿ ನಿರ್ವಹಿಸುತ್ತಾ ಬಂದಿರುವ ಮಾನವತಾವಾದಿಯಾಗಿದ್ದಾರೆ. ಇವರ ಮಾರ್ಗದರ್ಶನ ನಮಗೆ ಮಾದರಿಯಾಗಬೇಕು ಎಂದು ಸಲಹೆ ನೀಡಿದರು.

ನಂತರ ವಿದ್ಯಾರ್ಥಿಗಳಿಗೆ ಪಠ್ಯ ಪರಿಕರಗಳನ್ನು ವಿತರಣೆ ಮಡಲಾಯಿತು. ಮಾನವ ಬಂಧುತ್ವ ವೇದಿಕೆಯ ತಾಲೂಕು ಸಂಚಾಲಕ ಕವಿ, ಪ್ರಗತಿಪರ ಚಿಂತಕ ಸುಂದರ್ ಕಲಿವೀರ್, ಉಪನ್ಯಾಸಕ ಶಿವರಾಜು, ಸಿದ್ದರಾಜು, ಲಕ್ಷಣ್, ರೇವಣ್ಣ, ಶಿವಕುಮಾರ್, ಸೇರಿದಂತೆ ಗ್ರಾಮದ ವಿವಿಧ ಜನಾಂಗದ ಮುಖಂಡರು, ಯಜಮಾನರು ಇದ್ದರು.

# ಏಕದಿನ ಸರಣಿಯಿಂದ ಹಾರ್ದಿಕ್ ಪಾಂಡ್ಯ ಔಟ್..!

ಭಾರತ ಹಾಗೂ ಅಫ್ಘಾನಿಸ್ತಾನ ನಡುವಿನ ಬಹುನಿರೀಕ್ಷಿತ ಮೂರು ಪಂದ್ಯಗಳ ಏಕದಿನ ಸರಣಿ ಜೂನ್ 13ರಿಂದ ಆರಂಭವಾಗಲಿದ್ದು, ಮೊದಲ ಪಂದ್ಯ ಧರ್ಮಶಾಲಾದಲ್ಲಿ ನಡೆಯಲಿದೆ. ಈಗಾಗಲೇ ಉಭಯ ತಂಡಗಳು ಸರಣಿಗಾಗಿ ಭರ್ಜರಿ ಸಿದ್ಧತೆ ಆರಂಭಿಸಿವೆ. ಆದರೆ ಸರಣಿ ಆರಂಭಕ್ಕೂ ಮುನ್ನವೇ ಭಾರತ ತಂಡಕ್ಕೆ ಗಾಯದ ಸಮಸ್ಯೆ ದೊಡ್ಡ ತಲೆನೋವಾಗಿ ಪರಿಣಮಿಸಿದೆ. ವಿರಾಟ್ ಕೊಹ್ಲಿ ಲಭ್ಯತೆ ಕುರಿತು ಚರ್ಚೆಗಳು ನಡೆಯುತ್ತಿರುವ ನಡುವೆಯೇ ಇದೀಗ ತಂಡದ ಪ್ರಮುಖ ಆಲ್‌ರೌಂಡರ್ ಹಾರ್ದಿಕ್ ಪಾಂಡ್ಯ ಕೂಡ ಸರಣಿಯಿಂದ ಹೊರಗುಳಿದಿದ್ದಾರೆ ಎಂಬ ವರದಿಗಳು ಹೊರಬಿದ್ದಿವೆ.

ಹಾರ್ದಿಕ್ ಪಾಂಡ್ಯ ಕಳೆದ ಕೆಲವು ವರ್ಷಗಳಿಂದ ಭಾರತ ತಂಡದ ಪ್ರಮುಖ ಮ್ಯಾಚ್ ವಿನ್ನರ್ ಆಗಿ ಗುರುತಿಸಿಕೊಂಡಿದ್ದಾರೆ. ಬ್ಯಾಟಿಂಗ್, ಬೌಲಿಂಗ್ ಹಾಗೂ ನಾಯಕತ್ವದಲ್ಲಿಯೂ ತಮ್ಮದೇ ಆದ ಛಾಪು ಮೂಡಿಸಿರುವ ಪಾಂಡ್ಯ, ಸೀಮಿತ ಓವರ್‌ಗಳ ಕ್ರಿಕೆಟ್‌ನಲ್ಲಿ ಭಾರತ ತಂಡದ ಅವಿಭಾಜ್ಯ ಅಂಗವಾಗಿದ್ದಾರೆ. ಹೀಗಾಗಿ ಅವರ ಗೈರುಹಾಜರಿ ತಂಡದ ಸಮತೋಲನದ ಮೇಲೆ ಪರಿಣಾಮ ಬೀರುವ ಸಾಧ್ಯತೆ ಇದೆ.




ವಾಸ್ತವವಾಗಿ 2026ರ ಐಪಿಎಲ್ ಟೂರ್ನಿಯ ವೇಳೆಯೇ ಹಾರ್ದಿಕ್ ಪಾಂಡ್ಯ ಗಾಯದ ಸಮಸ್ಯೆಗೆ ಒಳಗಾಗಿದ್ದರು. ಈ ಕಾರಣದಿಂದಾಗಿ ಕೆಲ ಪಂದ್ಯಗಳಿಂದ ಹೊರಗುಳಿಯಬೇಕಾದ ಪರಿಸ್ಥಿತಿ ಎದುರಾಗಿತ್ತು. ನಂತರ ವೈದ್ಯಕೀಯ ತಂಡದ ಮೇಲ್ವಿಚಾರಣೆ ಯಲ್ಲಿ ಚಿಕಿತ್ಸೆ ಪಡೆದು ಚೇತರಿಸಿಕೊಂಡಿದ್ದ ಪಾಂಡ್ಯ ಮತ್ತೆ ತಂಡದಲ್ಲಿ ಕಾಣಿಸಿಕೊಂಡು ಟೂರ್ನಿಯ ಉಳಿದ ಪಂದ್ಯಗಳಲ್ಲಿ ಆಡಿದ್ದರು. ಇದರಿಂದ ಅವರು ಸಂಪೂರ್ಣ ಫಿಟ್ ಆಗಿ ದ್ದಾರೆ ಎಂಬ ಭರವಸೆ ಅಭಿಮಾನಿಗಳಲ್ಲಿ ಮೂಡಿತ್ತು.

ಆದರೆ ಐಪಿಎಲ್ ಮುಗಿದ ಕೆಲವೇ ದಿನಗಳಲ್ಲಿ ಮತ್ತೆ ಗಾಯದ ಸಮಸ್ಯೆ ಎದುರಾಗಿರುವುದು ಭಾರತ ತಂಡಕ್ಕೆ ಆಘಾತ ತಂದಿದೆ. ವರದಿಗಳ ಪ್ರಕಾರ, ಹಾರ್ದಿಕ್ ಪಾಂಡ್ಯ ಅವರ ಕಾಲು ಉಳುಕಿದ್ದು, ವೈದ್ಯರು ಅವರಿಗೆ ವಿಶ್ರಾಂತಿ ಪಡೆಯುವಂತೆ ಸೂಚಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಅಫ್ಘಾನಿಸ್ತಾನ ವಿರುದ್ಧದ ಏಕದಿನ ಸರಣಿಯಲ್ಲಿ ಅವರನ್ನು ಆಡಿಸದಿರಲು ನಿರ್ಧರಿಸಲಾಗಿದೆ ಎನ್ನಲಾಗಿದೆ.

ಸರಣಿಗೆ ಮುನ್ನ ನಡೆದ ಫಿಟ್ನೆಸ್ ಪರೀಕ್ಷೆಯಲ್ಲೂ ಪಾಂಡ್ಯ ಭಾಗವಹಿಸಿದ್ದರು. ಅವರು ಫಿಟ್ನೆಸ್ ಪರೀಕ್ಷೆಯಲ್ಲಿ ಉತ್ತೀರ್ಣರಾಗಿದ್ದರೂ, ದೀರ್ಘಾವಧಿಯ ದೃಷ್ಟಿಯಿಂದ ಯಾವುದೇ ಅಪಾಯ ಎದುರಾಗದಂತೆ ಮುನ್ನೆಚ್ಚರಿಕೆ ಕ್ರಮವಾಗಿ ಅವರನ್ನು ತಂಡದಿಂದ ಹೊರಗಿಡಲಾಗಿದೆ ಎಂದು ವರದಿಗಳು ತಿಳಿಸಿವೆ. ಮುಂಬರುವ ಪ್ರಮುಖ ಅಂತಾರಾಷ್ಟ್ರೀಯ ಟೂರ್ನಿಗಳನ್ನು ಗಮನದಲ್ಲಿಟ್ಟುಕೊಂಡು ಬಿಸಿಸಿಐ ಯಾವುದೇ ರಿಸ್ಕ್ ತೆಗೆದುಕೊಳ್ಳಲು ಇಚ್ಛಿಸುತ್ತಿಲ್ಲ ಎನ್ನಲಾಗಿದೆ.

ಗಾಯದಿಂದ ಬಳಲುತ್ತಿರುವ ಹಾರ್ದಿಕ್ ಪಾಂಡ್ಯ ಮುಂದಿನ ಎರಡು ವಾರಗಳ ಕಾಲ ಬೆಂಗಳೂರಿನಲ್ಲಿರುವ ಬಿಸಿಸಿಐ ಸೆಂಟರ್ ಆಫ್ ಎಕ್ಸಲೆನ್ಸ್‌ನಲ್ಲಿ ಪುನಶ್ಚೇತನ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಅಲ್ಲಿ ವೈದ್ಯಕೀಯ ತಜ್ಞರು ಹಾಗೂ ಫಿಟ್ನೆಸ್ ಪರಿಣಿತರ ಮೇಲ್ವಿಚಾರಣೆಯಲ್ಲಿ ಅವರು ಚಿಕಿತ್ಸೆ ಪಡೆಯಲಿದ್ದಾರೆ. ಸಾಮಾಜಿಕ ಜಾಲತಾಣಗಳಲ್ಲಿ ಪಾಂಡ್ಯ ಬೆಂಗಳೂರಿನಲ್ಲಿರುವ ಕೆಲವು ವಿಡಿಯೋಗಳು ಮತ್ತು ಚಿತ್ರಗಳು ವೈರಲ್ ಆಗಿದ್ದು, ಅವರ ಆರೋಗ್ಯದ ಬಗ್ಗೆ ಅಭಿಮಾನಿಗಳು ಕಳವಳ ವ್ಯಕ್ತಪಡಿಸಿದ್ದಾರೆ.

ಇದೀಗ ಹಾರ್ದಿಕ್ ಪಾಂಡ್ಯ ಅವರ ಸ್ಥಾನವನ್ನು ಯಾರು ತುಂಬಲಿದ್ದಾರೆ ಎಂಬ ಪ್ರಶ್ನೆ ಕೂಡ ಉದ್ಭವಿಸಿದೆ. ಆದರೆ ಈವರೆಗೆ ಬಿಸಿಸಿಐ ಯಾವುದೇ ಬದಲಿ ಆಟಗಾರನ ಹೆಸರನ್ನು ಅಧಿಕೃತವಾಗಿ ಘೋಷಿಸಿಲ್ಲ. ತಂಡದ ಅಗತ್ಯತೆ ಹಾಗೂ ಪಿಚ್ ಪರಿಸ್ಥಿತಿಯನ್ನು ಪರಿಗಣಿಸಿ ಆಯ್ಕೆ ಸಮಿತಿ ಅಂತಿಮ ಕ್ಷಣದಲ್ಲಿ ನಿರ್ಧಾರ ಕೈಗೊಳ್ಳುವ ಸಾಧ್ಯತೆ ಇದೆ.

ಪಾಂಡ್ಯ ಅನುಪಸ್ಥಿತಿಯಲ್ಲಿ ಭಾರತ ತಂಡದ ಮಧ್ಯಮ ಕ್ರಮಾಂಕದ ಬ್ಯಾಟಿಂಗ್ ಹಾಗೂ ಆರನೇ ಬೌಲರ್ ಆಯ್ಕೆ ಸವಾಲಾಗಿ ಪರಿಣಮಿಸಬಹುದು. ಕಳೆದ ಕೆಲವು ವರ್ಷಗಳಲ್ಲಿ ಅನೇಕ ನಿರ್ಣಾಯಕ ಪಂದ್ಯಗಳಲ್ಲಿ ಹಾರ್ದಿಕ್ ಪಾಂಡ್ಯ ತಮ್ಮ ಸ್ಫೋಟಕ ಬ್ಯಾಟಿಂಗ್ ಹಾಗೂ ಪರಿಣಾಮಕಾರಿ ಬೌಲಿಂಗ್ ಮೂಲಕ ಭಾರತಕ್ಕೆ ಗೆಲುವು ತಂದುಕೊಟ್ಟಿದ್ದಾರೆ. ಹೀಗಾಗಿ ಅವರ ಅನುಪಸ್ಥಿತಿ ಅಫ್ಘಾನಿಸ್ತಾನ ವಿರುದ್ಧದ ಸರಣಿಯಲ್ಲಿ ಸ್ಪಷ್ಟವಾಗಿ ಕಾಣಿಸಿಕೊಳ್ಳುವ ಸಾಧ್ಯತೆ ಇದೆ.

ಇನ್ನು ಸರಣಿಯ ವೇಳಾಪಟ್ಟಿಯತ್ತ ಗಮನ ಹರಿಸುವುದಾದರೆ, ಜೂನ್ 13ರಂದು ಧರ್ಮಶಾಲಾದಲ್ಲಿ ಮೊದಲ ಏಕದಿನ ಪಂದ್ಯ ನಡೆಯಲಿದೆ. ಬಳಿಕ ಉಭಯ ತಂಡಗಳು ಜೂನ್ 17ರಂದು ಲಕ್ನೋದಲ್ಲಿ ನಡೆಯಲಿರುವ ಎರಡನೇ ಪಂದ್ಯದಲ್ಲಿ ಮುಖಾಮುಖಿಯಾಗಲಿವೆ. ಸರಣಿಯ ಮೂರನೇ ಹಾಗೂ ಅಂತಿಮ ಪಂದ್ಯ ಜೂನ್ 20ರಂದು ಚೆನ್ನೈನಲ್ಲಿ ನಡೆಯಲಿದ್ದು, ಈ ಪಂದ್ಯ ಸರಣಿಯ ಫಲಿತಾಂಶವನ್ನು ನಿರ್ಧರಿಸುವ ಪಂದ್ಯವಾಗುವ ಸಾಧ್ಯತೆ ಇದೆ.

ಅಫ್ಘಾನಿಸ್ತಾನ ತಂಡ ಕೂಡ ಇತ್ತೀಚಿನ ವರ್ಷಗಳಲ್ಲಿ ಏಕದಿನ ಕ್ರಿಕೆಟ್‌ನಲ್ಲಿ ಉತ್ತಮ ಪ್ರದರ್ಶನ ನೀಡುತ್ತಿದ್ದು, ಭಾರತವನ್ನು ಸುಲಭವಾಗಿ ಎದುರಾಳಿ ಎಂದು ಪರಿಗಣಿಸುವ ಸ್ಥಿತಿಯಲ್ಲಿಲ್ಲ. ರಶೀದ್ ಖಾನ್, ರಹಮಾನುಲ್ಲಾ ಗುರ್ಬಾಜ್ ಹಾಗೂ ಮೊಹಮ್ಮದ್ ನಬಿ ಅವರಂತಹ ಅನುಭವಿ ಆಟಗಾರರ ನೆರವಿನಿಂದ ಅಫ್ಘಾನಿಸ್ತಾನ ತಂಡ ಭಾರತಕ್ಕೆ ಸವಾಲು ಒಡ್ಡುವ ವಿಶ್ವಾಸದಲ್ಲಿದೆ.

ಸರಣಿ ಆರಂಭಕ್ಕೂ ಮುನ್ನವೇ ಹಾರ್ದಿಕ್ ಪಾಂಡ್ಯ ಗಾಯಗೊಂಡಿರುವುದು ಭಾರತ ತಂಡಕ್ಕೆ ದೊಡ್ಡ ಹಿನ್ನಡೆಯಾಗಿ ಪರಿಣಮಿಸಿದೆ. ವಿರಾಟ್ ಕೊಹ್ಲಿ ಲಭ್ಯತೆ ಕುರಿತ ಚರ್ಚೆಗಳ ನಡುವೆ ಮತ್ತೊಬ್ಬ ಪ್ರಮುಖ ಆಟಗಾರನ ಗೈರುಹಾಜರಿ ತಂಡದ ತಯಾರಿಯ ಮೇಲೆ ಪರಿಣಾಮ ಬೀರಿದೆ. ಇದೀಗ ಅಭಿಮಾನಿಗಳ ಗಮನ ಸಂಪೂರ್ಣವಾಗಿ ಬಿಸಿಸಿಐನ ಅಧಿಕೃತ ಪ್ರಕಟಣೆ ಹಾಗೂ ಹಾರ್ದಿಕ್ ಪಾಂಡ್ಯ ಅವರ ಚೇತರಿಕೆಯತ್ತ ನೆಟ್ಟಿದೆ.

# ಬೆಳ್ಳಿತೆರೆ ಮೇಲೆ ಸೋಲಿಲ್ಲದ ಸರದಾರ 'ಬೆಳ್ಳೂಡಿ ಕಾಳಿ' ಟಗರು ಕಥೆ

'ಫಸ್ಟ್ ಡೇ ಫಸ್ಟ್ ಶೋ', 'ಶಾಲಿವಾಹನ ಶಕೆ', 'ಒಂದ್ ಕಥೆ ಹೇಳ್ಲಾ' ಹಾಗೂ 'ವಾವ್' ಸಿನಿಮಾಗಳ ಮೂಲಕ ಗುರುತಿಸಿಕೊಂಡಿರುವ ಯುವ ನಿರ್ದೇಶಕ ಗಿರೀಶ್ ಜಿ ಇದೀಗ ಪ್ರಸಿದ್ಧ ಟಗರು 'ಬೆಳ್ಳೂಡಿ ಕಾಳಿ'ಯ ಜೀವನಗಾಥೆಯನ್ನು ಡಾಕ್ಯುಮೆಂಟರಿ ರೂಪದಲ್ಲಿ ತೆರೆಗೆ ತರಲು ಮುಂದಾಗಿದ್ದಾರೆ. ಟಗರು ಕಾಳಗದ ಜಗತ್ತಿನಲ್ಲಿ 'ಬೆಳ್ಳೂಡಿ ಕಾಳಿ' ಒಂದು ದಂತಕಥೆಯಂತಿತ್ತು. ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ಹೆಸರು ಮಾಡಿದ್ದ ಈ ಟಗರು, ಅನೇಕ ಕಾಳಗಗಳಲ್ಲಿ ಗೆಲುವು ಸಾಧಿಸಿ ಸಾವಿರಾರು ಅಭಿಮಾನಿಗಳನ್ನು ಸಂಪಾದಿಸಿತ್ತು. ಕಾಳಿ ಕಣಕ್ಕಿಳಿಯಲಿದೆ ಎಂಬ ಸುದ್ದಿ ತಿಳಿದರೆ ಸಾಕು, ಅಭಿಮಾನಿಗಳು ದೂರದೂರಿನಿಂದ ಬಂದು ಅದರ ಆಟವನ್ನು ವೀಕ್ಷಿಸುತ್ತಿದ್ದರು.

2024ರಲ್ಲಿ ಅಕಾಲಿಕವಾಗಿ ಮೃತಪಟ್ಟ ಕಾಳಿಗೆ ಸಾವಿರಾರು ಜನರು ಅಂತಿಮ ನಮನ ಸಲ್ಲಿಸಿದ್ದರು. ಮಾಲೀಕರಾದ ರಾಘವೇಂದ್ರ ಮತ್ತು ತಂಡವು ಹರಿಹರ ತಾಲೂಕಿನ ಬೆಳ್ಳೂಡಿ ಗ್ರಾಮದ ಬಳಿ ಕಾಳಿಗೆ ಸಮಾಧಿ ನಿರ್ಮಿಸಿದ್ದು, ಇಂದಿಗೂ ಅಲ್ಲಿ ನಿತ್ಯ ಪೂಜೆ ನಡೆಯುತ್ತಿದೆ.

ಈ ಅಪರೂಪದ ಕಥೆಯನ್ನು 'ಕಾಳಿ-ದಿ ಗೋಟ್' ಹೆಸರಿನಲ್ಲಿ ಡಾಕ್ಯುಮೆಂಟರಿಯಾಗಿ ನಿರ್ಮಿಸಲಾಗುತ್ತಿದೆ. ಜೈನ್ ಯೂನಿವರ್ಸಿಟಿ ಸೇರಿದಂತೆ ಹಲವು ಸಿನಿಮಾ ವಿದ್ಯಾರ್ಥಿಗಳ ಸಹಕಾರದೊಂದಿಗೆ ದಾವಣಗೆರೆ, ಬಾಗಲಕೋಟೆ ಸೇರಿದಂತೆ ವಿವಿಧ ಪ್ರದೇಶಗಳಲ್ಲಿ ಚಿತ್ರೀಕರಣ ನಡೆಸಲಾಗಿದೆ.

ಡಾಕ್ಯುಮೆಂಟರಿಯಲ್ಲಿ ಕಾಳಿಯ ಸಾಧನೆಗಳಷ್ಟೇ ಅಲ್ಲದೆ, ಅದರೊಂದಿಗೆ ಬೆಸೆದುಕೊಂಡಿದ್ದ ಅಭಿಮಾನಿಗಳು, ಮಾಲೀಕರು ಹಾಗೂ ಗ್ರಾಮಸ್ಥರ ಭಾವನಾತ್ಮಕ ನೆನಪುಗಳನ್ನೂ ದಾಖಲಿಸಲಾಗಿದೆ. ಕಾಳಿಯ ಗೆಲುವಿನ ಪಯಣ, ಅದರ ಜನಪ್ರಿಯತೆ ಹಾಗೂ ಗ್ರಾಮೀಣ ಕ್ರೀಡಾ ಸಂಸ್ಕೃತಿಯ ಮಹತ್ವವನ್ನು ಚಿತ್ರತಂಡ ತೆರೆ ಮೇಲೆ ತರುವ ಪ್ರಯತ್ನ ಮಾಡಿದೆ.

ವಿಶೇಷವೆಂದರೆ, ಕೇವಲ ಒಂದು ಟಗರಿನ ಕಥೆಯಾಗಿ ಮಾತ್ರವಲ್ಲದೆ, ಮನುಷ್ಯ ಮತ್ತು ಪ್ರಾಣಿಯ ನಡುವಿನ ನಂಬಿಕೆ, ಪ್ರೀತಿ ಹಾಗೂ ಬಾಂಧವ್ಯದ ಕಥೆಯಾಗಿಯೂ ಈ ಡಾಕ್ಯುಮೆಂಟರಿ ಮೂಡಿಬರಲಿದೆ. ಗ್ರಾಮೀಣ ಭಾಗದ ಜೀವನಶೈಲಿ ಮತ್ತು ಅಲ್ಲಿನ ಸಂಸ್ಕೃತಿಯನ್ನು ಜಾಗತಿಕ ಪ್ರೇಕ್ಷಕರಿಗೆ ಪರಿಚಯಿಸುವ ಉದ್ದೇಶವೂ ಚಿತ್ರತಂಡಕ್ಕಿದೆ.

'ಬೆಳ್ಳೂಡಿ ಕಾಳಿ' ಕೇವಲ ಒಂದು ಟಗರು ಮಾತ್ರವಾಗಿರಲಿಲ್ಲ. ಅದು ಸಾವಿರಾರು ಅಭಿಮಾನಿಗಳ ಭಾವನೆ, ಹಲವು ರೈತ ಕುಟುಂಬಗಳ ಹೆಮ್ಮೆ ಮತ್ತು ಟಗರು ಕಾಳಗದ ಲೋಕದಲ್ಲಿ ಒಂದು ವಿಶೇಷ ಅಧ್ಯಾಯವಾಗಿತ್ತು. ಅದರ ಸಾಧನೆ, ಜನಪ್ರಿಯತೆ ಮತ್ತು ಅಗಲಿಕೆಯ ಬಳಿಕ ಮೂಡಿದ ಭಾವನಾತ್ಮಕ ಕ್ಷಣಗಳನ್ನು ಈ ಡಾಕ್ಯುಮೆಂಟರಿ ಮೂಲಕ ದಾಖಲಿಸುವ ಮೂಲಕ ಮುಂದಿನ ಪೀಳಿಗೆಗೂ ಉಳಿಸುವ ಪ್ರಯತ್ನ ನಡೆಯುತ್ತಿದೆ.

ಪ್ರಸ್ತುತ ಪೋಸ್ಟ್ ಪ್ರೊಡಕ್ಷನ್ ಕೆಲಸಗಳು ನಡೆಯುತ್ತಿದ್ದು, ಕನ್ನಡ ಹಾಗೂ ಇಂಗ್ಲಿಷ್ ಭಾಷೆಗಳಲ್ಲಿ ಡಾಕ್ಯುಮೆಂಟರಿ ಬಿಡುಗಡೆಯಾಗಲಿದೆ. ಮನುಷ್ಯ ಮತ್ತು ಪ್ರಾಣಿಯ ನಡುವಿನ ಭಾವನಾತ್ಮಕ ಬಾಂಧವ್ಯ, ಗ್ರಾಮೀಣ ಸಂಸ್ಕೃತಿ ಹಾಗೂ 'ಬೆಳ್ಳೂಡಿ ಕಾಳಿ'ಯ ಸಾಧನೆಯನ್ನು ವಿಶ್ವಕ್ಕೆ ಪರಿಚಯಿಸುವ ಉದ್ದೇಶವನ್ನು ಚಿತ್ರತಂಡ ಹೊಂದಿದೆ.

ಇನ್ನೆರಡು-ಮೂರು ತಿಂಗಳಲ್ಲಿ ಪ್ರಮುಖ ಡಿಜಿಟಲ್ ವೇದಿಕೆಯಲ್ಲಿ ಬಿಡುಗಡೆಯಾಗಲಿರುವ 'ಕಾಳಿ-ದಿ ಗೋಟ್' ಡಾಕ್ಯುಮೆಂಟರಿ, ಕನ್ನಡ ನಾಡಿನ ಹೆಮ್ಮೆಯ ಟಗರು 'ಬೆಳ್ಳೂಡಿ ಕಾಳಿ'ಯ ಕಥೆಯನ್ನು ಜಾಗತಿಕ ಮಟ್ಟಕ್ಕೆ ಕೊಂಡೊಯ್ಯುವ ಪ್ರಯತ್ನವಾಗಿದೆ.




# ಅನ್ನದಾತನ ಬೆಂಬಲಕ್ಕೆ ನಿಂತ ಜೂನಿಯರ್ ಟೈಗರ್ ವಿನೋದ್..7ಕೋಟಿಯಲ್ಲಿ ಬಲರಾಮ

**ಬೆಂಗಳೂರು:** ಕನ್ನಡ ಚಿತ್ರರಂಗದಲ್ಲಿ ದೊಡ್ಡ ಬಜೆಟ್, ಭಾರೀ ಸಂಭಾವನೆ ಮತ್ತು ಹೆಚ್ಚುತ್ತಿರುವ ನಿರ್ಮಾಣ ವೆಚ್ಚಗಳ ಬಗ್ಗೆ ಆಗಾಗ ಚರ್ಚೆಗಳು ನಡೆಯುತ್ತಲೇ ಇವೆ. ಇಂತಹ ಸಂದರ್ಭದಲ್ಲಿ ನಟ ವಿನೋದ್ ಪ್ರಭಾಕರ್ ನೀಡಿರುವ ಹೇಳಿಕೆ ಸಿನಿ ವಲಯದಲ್ಲಿ ವಿಶೇಷ ಗಮನ ಸೆಳೆಯುತ್ತಿದೆ. ತಮ್ಮ ಹೊಸ ಸಿನಿಮಾ 'ಬಲರಾಮನ ದಿನಗಳು' ಚಿತ್ರದ ಹಾಡು ಬಿಡುಗಡೆ ಸಮಾರಂಭದಲ್ಲಿ ಮಾತನಾಡಿದ ಅವರು, ನಿರ್ಮಾಪಕರ ಹಿತಾಸಕ್ತಿಯೇ ಮೊದಲ ಆದ್ಯತೆ ಆಗಬೇಕು ಎಂಬ ಸಂದೇಶ ನೀಡಿದರು.

ಕೆ.ಎಂ. ಚೈತನ್ಯ ನಿರ್ದೇಶನದ 'ಬಲರಾಮನ ದಿನಗಳು' ಚಿತ್ರ ಜೂನ್ 26ರಂದು ರಾಜ್ಯಾದ್ಯಂತ ಬಿಡುಗಡೆಯಾಗಲಿದ್ದು, ಚಿತ್ರದ ರೆಟ್ರೋ ಶೈಲಿಯ 'ಕ್ವಾಟ್ರು' ಹಾಡು ಇತ್ತೀಚೆಗೆ ಅನಾವರಣಗೊಂಡಿದೆ. ಹಿರಿಯ ನಟಿ ತಾರಾ ಅನುರಾಧಾ ಹಾಡು ಬಿಡುಗಡೆ ಮಾಡಿದ್ದು, ಈ ಕಾರ್ಯಕ್ರಮದಲ್ಲಿ ಚಿತ್ರತಂಡದ ಸದಸ್ಯರು ಭಾಗವಹಿಸಿದ್ದರು.

**ರೆಟ್ರೋ ಅಂಡರ್‌ವರ್ಲ್ಡ್ ಕಥೆಯಲ್ಲಿ ವಿನೋದ್ ಪ್ರಭಾಕರ್:** 'ಬಲರಾಮನ ದಿನಗಳು' ಸಿನಿಮಾ 1980-90ರ ದಶಕದ ಭೂಗತ ಲೋಕದ ಹಿನ್ನೆಲೆಯನ್ನು ಹೊಂದಿರುವ ಚಿತ್ರವಾಗಿದೆ. ಅಂಡರ್‌ವರ್ಲ್ಡ್ ಜಗತ್ತಿನ ಕಥೆಯನ್ನು ವಿಭಿನ್ನವಾಗಿ ಹೇಳುವ ಪ್ರಯತ್ನವನ್ನು ನಿರ್ದೇಶಕ ಕೆ.ಎಂ. ಚೈತನ್ಯ ಮಾಡಿದ್ದಾರೆ. ಚಿತ್ರದಲ್ಲಿ ವಿನೋದ್ ಪ್ರಭಾಕರ್ ಪ್ರಮುಖ ಪಾತ್ರದಲ್ಲಿ ನಟಿಸಿದ್ದು, ಅವರೊಂದಿಗೆ ಪ್ರಿಯಾ ಆನಂದ್ ನಾಯಕಿಯಾಗಿ ಕಾಣಿಸಿಕೊಂಡಿದ್ದಾರೆ.

ಚಿತ್ರದ ಇತ್ತೀಚೆಗೆ ಬಿಡುಗಡೆಯಾದ 'ಕ್ವಾಟ್ರು' ಹಾಡು ಸಾಮಾಜಿಕ ಜಾಲತಾಣಗಳಲ್ಲಿ ಸಾಕಷ್ಟು ಗಮನ ಸೆಳೆಯುತ್ತಿದೆ. ಸಂಗೀತ ನಿರ್ದೇಶಕ ಸಂತೋಷ್ ನಾರಾಯಣನ್ ಸಂಯೋಜಿಸಿರುವ ಈ ಹಾಡಿನಲ್ಲಿ ನಟಿ ವಂದಿತಾ ಗೌಡ ಗ್ಲಾಮರಸ್ ಅವತಾರದಲ್ಲಿ ಹೆಜ್ಜೆ ಹಾಕಿದ್ದಾರೆ. ರೆಟ್ರೋ ಶೈಲಿಯ ಸೆಟ್‌ಗಳು, ಸಂಗೀತ ಹಾಗೂ ನೃತ್ಯ ಸಂಯೋಜನೆಯಿಂದ ಹಾಡು ಸಿನಿಪ್ರಿಯರ ಗಮನ ಸೆಳೆಯುತ್ತಿದೆ.

**ವಿನೋದ್ ಮೇಲೆ ಜಾಸ್ತಿ ಹಣ ಹಾಕಬೇಡಿ:** ಕಾರ್ಯಕ್ರಮದಲ್ಲಿ ಮಾತನಾಡಿದ ವಿನೋದ್ ಪ್ರಭಾಕರ್, "ಈ ಸಿನಿಮಾ ಒಪ್ಪಿಕೊಳ್ಳುವಾಗ ನಿರ್ಮಾಪಕರಿಗೆ ಒಂದು ಮಾತು ಹೇಳಿದ್ದೆ. ನನ್ನ ಮೇಲೆ ಅತಿಯಾದ ಬಂಡವಾಳ ಹೂಡಬೇಡಿ. ಚಿತ್ರದ ಬಜೆಟ್ 7 ಕೋಟಿ ರೂಪಾಯಿಗಿಂತ ಹೆಚ್ಚಾಗಬಾರದು ಎಂದು ಹೇಳಿದ್ದೆ. ನಿರ್ಮಾಪಕರ ಹಣ ಸುರಕ್ಷಿತವಾಗಿರಬೇಕು ಎನ್ನುವುದು ನನ್ನ ಉದ್ದೇಶವಾಗಿತ್ತು" ಎಂದು ಹೇಳಿದರು.

ಅವರ ಈ ಮಾತು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದವರಿಂದ ಭಾರೀ ಮೆಚ್ಚುಗೆ ಪಡೆದುಕೊಂಡಿತು. ಇತ್ತೀಚಿನ ದಿನಗಳಲ್ಲಿ ಕೆಲವು ಚಿತ್ರಗಳು ಅತಿಯಾದ ವೆಚ್ಚದ ಕಾರಣ ನಷ್ಟ ಅನುಭವಿಸುತ್ತಿರುವ ಸಂದರ್ಭದಲ್ಲಿ, ಒಬ್ಬ ನಾಯಕ ನಟನೇ ನಿರ್ಮಾಪಕರ ಹಿತಾಸಕ್ತಿಯ ಬಗ್ಗೆ ಮಾತನಾಡಿರುವುದು ವಿಶೇಷವಾಗಿ ಗಮನ ಸೆಳೆದಿದೆ.

**ನನ್ನ ವೃತ್ತಿಜೀವನದ ಅತಿದೊಡ್ಡ ಸಿನಿಮಾ:** ಬಲರಾಮನ ದಿನಗಳು' ಬಗ್ಗೆ ಮಾತನಾಡಿದ ವಿನೋದ್ ಪ್ರಭಾಕರ್, "ಮಾದೇವ ಚಿತ್ರದ ಬಳಿಕ ನಾನು ಒಪ್ಪಿಕೊಂಡಿರುವ ಅತ್ಯಂತ ವಿಶೇಷ ಸಿನಿಮಾ ಇದು. ಒಬ್ಬ ನಟನಾಗಿ ಯಾವುದೇ ಪಾತ್ರ ಮಾಡಲು ನಾನು ಸಿದ್ಧನಿದ್ದೇನೆ. ಇದು ಕಾಲ್ಪನಿಕ ಕಥೆಯಾಗಿದ್ದರೂ, ಪಾತ್ರದ ಆಳ ಮತ್ತು ಹಿನ್ನೆಲೆ ತುಂಬಾ ವಿಭಿನ್ನವಾಗಿದೆ. ನನ್ನ ಸಿನಿ ಜೀವನದಲ್ಲೇ ಇದು ಅತಿದೊಡ್ಡ ಚಿತ್ರಗಳಲ್ಲಿ ಒಂದಾಗಿದೆ" ಎಂದು ಹೇಳಿದರು.

ಇದರ ಜೊತೆಗೆ, ಕೆವಿಎನ್ ಪ್ರೊಡಕ್ಷನ್ಸ್ ಚಿತ್ರದ ವಿತರಣೆಯ ಹೊಣೆ ಹೊತ್ತಿರುವುದು ಚಿತ್ರಕ್ಕೆ ಮತ್ತಷ್ಟು ಬಲ ತಂದಿದೆ ಎಂದು ಅವರು ಅಭಿಪ್ರಾಯಪಟ್ಟರು.

**ಆ ದಿನಗಳು ಚಿತ್ರದ ಮತ್ತೊಂದು ಅಧ್ಯಾಯ:** ಚಿತ್ರದ ನಿರ್ದೇಶಕ ಕೆ.ಎಂ. ಚೈತನ್ಯ ಮಾತನಾಡಿ, ""ಆ ದಿನಗಳು' ಸಿನಿಮಾ ಬಿಡುಗಡೆಯಾಗಿ 19 ವರ್ಷಗಳಾಗಿವೆ. ಆ ಚಿತ್ರದ ನಂತರ ಅಂಡರ್‌ವರ್ಲ್ಡ್ ಕುರಿತ ಅನೇಕ ಪುಸ್ತಕಗಳನ್ನು ಅಧ್ಯಯನ ಮಾಡಿದೆ. ಸಾಕಷ್ಟು ಸಂಶೋಧನೆ ನಡೆಸಿ ಈ ಕಥೆಯನ್ನು ಸಿದ್ಧಪಡಿಸಿದ್ದೇನೆ. 'ಬಲರಾಮನ ದಿನಗಳು' ಅಂಡರ್‌ವರ್ಲ್ಡ್ ಜಗತ್ತಿನ ಮತ್ತೊಂದು ವಿಭಿನ್ನ ಆಯಾಮವನ್ನು ಪ್ರೇಕ್ಷಕರ ಮುಂದೆ ತರುತ್ತದೆ" ಎಂದು ಹೇಳಿದರು.

ಚಿತ್ರದಲ್ಲಿ ಒಟ್ಟು ಏಳು ಹಾಡುಗಳಿದ್ದು, ಪ್ರತಿಯೊಂದು ಹಾಡು ಕಥೆಯ ಭಾಗವಾಗಿ ಮೂಡಿಬಂದಿದೆ ಎಂದು ಅವರು ತಿಳಿಸಿದರು.

ತಾರಾ ಅನುರಾಧಾ ಮೆಚ್ಚುಗೆ: ಹಿರಿಯ ನಟಿ ತಾರಾ ಅನುರಾಧಾ ಮಾತನಾಡಿ, "ಹಾಡು ತುಂಬಾ ಚೆನ್ನಾಗಿ ಮೂಡಿಬಂದಿದೆ. ನಿರ್ಮಾಪಕ ಶ್ರೇಯಸ್ ಅವರಿಗೆ ಸಿನಿಮಾದ ಮೇಲೆ ಅಪಾರ ಪ್ರೀತಿ ಇದೆ. ಪದ್ಮಾವತಿ ಜಯರಾಮ್ ಇಡೀ ತಂಡವನ್ನು ಕುಟುಂಬದಂತೆ ನೋಡಿಕೊಂಡಿದ್ದಾರೆ. ಚಿತ್ರತಂಡದ ಶ್ರಮ ಪರದೆ ಮೇಲೆ ಕಾಣಲಿದೆ. ಇದು ಕ್ಲಾಸಿಕ್ ಸಿನಿಮಾ ಆಗುವ ಎಲ್ಲಾ ಗುಣಗಳನ್ನು ಹೊಂದಿದೆ" ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

**ನಿರ್ಮಾಪಕರ ವಿಶ್ವಾಸ:** ನಿರ್ಮಾಪಕಿ ಪದ್ಮಾವತಿ ಜಯರಾಮ್ ಮಾತನಾಡಿ, "ಈ ಚಿತ್ರದ ಬಗ್ಗೆ ನನಗೆ ಯಾವುದೇ ಭಯವಿಲ್ಲ. ನಿರ್ದೇಶಕರ ಮೇಲೆ ಸಂಪೂರ್ಣ ವಿಶ್ವಾಸವಿದೆ. ಇಡೀ ತಂಡ ತುಂಬಾ ಪ್ರಾಮಾಣಿಕವಾಗಿ ಕೆಲಸ ಮಾಡಿದೆ. ಪ್ರೇಕ್ಷಕರು ಚಿತ್ರವನ್ನು ಖಂಡಿತವಾಗಿ ಮೆಚ್ಚುತ್ತಾರೆ" ಎಂದು ಹೇಳಿದರು.

ಇದೇ ವೇಳೆ ನಿರ್ಮಾಪಕ ಶ್ರೇಯಸ್, ಇನ್ನೂ ಒಂದು ಹಾಡು ಹಾಗೂ ಟ್ರೈಲರ್ ಬಿಡುಗಡೆಗೆ ಸಿದ್ಧತೆ ನಡೆಯುತ್ತಿದೆ ಎಂದು ಮಾಹಿತಿ ನೀಡಿದರು.

**ಸಿನಿ ವಲಯದಲ್ಲಿ ಚರ್ಚೆಗೆ ಕಾರಣವಾದ ವಿನೋದ್ ಮಾತು:** ಕನ್ನಡ ಚಿತ್ರರಂಗದಲ್ಲಿ ಇತ್ತೀಚಿನ ವರ್ಷಗಳಲ್ಲಿ ಹೆಚ್ಚುತ್ತಿರುವ ಬಜೆಟ್, ಭಾರೀ ಸಂಭಾವನೆ ಮತ್ತು ಬಾಕ್ಸ್ ಆಫೀಸ್ ಒತ್ತಡಗಳ ನಡುವೆ ವಿನೋದ್ ಪ್ರಭಾಕರ್ ನೀಡಿರುವ ಹೇಳಿಕೆ ಸಾಕಷ್ಟು ಚರ್ಚೆಗೆ ಕಾರಣವಾಗಿದೆ. ಕೆಲವೊಮ್ಮೆ ಚಿತ್ರದ ವ್ಯಾಪ್ತಿಗಿಂತಲೂ ಹೆಚ್ಚಿನ ವೆಚ್ಚ ಮಾಡುವುದರಿಂದ ನಿರ್ಮಾಪಕರು ಆರ್ಥಿಕ ಸಂಕಷ್ಟಕ್ಕೆ ಸಿಲುಕುವ ಉದಾಹರಣೆಗಳು ಸಾಕಷ್ಟಿವೆ.

ಅಂತಹ ಸಂದರ್ಭದಲ್ಲಿ "ನಿರ್ಮಾಪಕರು ಉಳಿದರೆ ಮಾತ್ರ ಚಿತ್ರರಂಗ ಉಳಿಯುತ್ತದೆ" ಎಂಬ ಸಂದೇಶವನ್ನು ಪರೋಕ್ಷವಾಗಿ ನೀಡಿರುವ ವಿನೋದ್ ಪ್ರಭಾಕರ್ ಅವರ ನಿಲುವು ಸಿನಿ ವಲಯದಲ್ಲಿ ಮೆಚ್ಚುಗೆಗೆ ಪಾತ್ರವಾಗಿದೆ. ಹೀಗಾಗಿ 'ಬಲರಾಮನ ದಿನಗಳು' ಸಿನಿಮಾ ಮಾತ್ರವಲ್ಲ, ಅದರ ಹಿಂದೆ ಇರುವ ಈ ಚಿಂತನೆಯೂ ಈಗ ಸಿನಿಪ್ರಿಯರ ಗಮನ ಸೆಳೆಯುತ್ತಿದೆ



ಕೇವಲ ಒಂದು ಸಿನಿಮಾ ಪ್ರಚಾರ ಕಾರ್ಯಕ್ರಮವಾಗಿರದೆ, ಕನ್ನಡ ಚಿತ್ರರಂಗದ ಪ್ರಸ್ತುತ ಸ್ಥಿತಿ, ನಿರ್ಮಾಪಕರ ಸಂಕಷ್ಟ ಮತ್ತು ಉದ್ಯಮದ ಭವಿಷ್ಯದ ಬಗ್ಗೆ ವಿನೋದ್ ಪ್ರಭಾಕರ್ ವ್ಯಕ್ತಪಡಿಸಿದ ಕಾಳಜಿ ವಿಶೇಷ ಗಮನ ಸೆಳೆದಿದೆ. ಚಿತ್ರರಂಗದಲ್ಲಿ ಲಾಭದ ಜೊತೆಗೆ ಜವಾಬ್ದಾರಿಯೂ ಇರಬೇಕು ಎಂಬ ಸಂದೇಶವನ್ನು ಅವರು ನೀಡಿದ್ದು, 'ಬಲರಾಮನ ದಿನಗಳು' ಸಿನಿಮಾ ಇದೀಗ ಪ್ರೇಕ್ಷಕರ ನಿರೀಕ್ಷೆಯ ಕೇಂದ್ರಬಿಂದುವಾಗಿ ಪರಿಣಮಿಸಿದೆ.